ಕೇಂದ್ರ ಪರಿಸರ ಇಲಾಖೆ ಮತ್ತು ರಾಜ್ಯ ವಾಯು ಮಾಲಿನ್ಯ ಕೇಂದ್ರಿಯ ಮಂಡಳಿಯ ಒಪ್ಪಿಗೆಯು ದೊರೆತ ನಂತರ ಯಲಹಂಕ ಡೀಸೆಲ್ ಉತ್ಪಾದನಾ ಘಟಕದ ವಿಸ್ತಾರಣಾ ಯೋಜನೆಯು ಕಾರ್ಯಗತವಾಗಲಿದೆ. ಒಪ್ಪಿಗೆ ಪಡೆಯುವುದಕ್ಕಾಗಿ ಪ್ರಯತ್ನಿಸಲಾಗುತ್ತಿದೆ.

ಊ) ಸುಮಾರು 828 ಮಿಲಿಯನ್ ಯೂನಿಟ್‌ಗಳು.

ಋ) ಗೋವಾ ಮತ್ತು ಕರ್ನಾಟಕ ಅಧಿಕಾರಿಗಳ ತಾಂತ್ರಿಕ ಸಮಿತಿಯ ನಿರ್ಧಾರದಂತೆ ಗೋವಾದ ಜೀವಿ ಶಾಸ್ತ್ರದ ಮೇಲೆ ಮಹಾದಾಯಿ ಯೋಜನೆಯಿಂದ ಆಗುವ ಪ್ರಭಾವದ ಬಗ್ಗೆ ಪರಿಸರ ಪ್ರಭಾವಿ ಅಧ್ಯಯನ ಕಾರ್ಯಕ್ರಮವನ್ನು ಕೈಗೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.

ಕರ್ನಾಟಕ ವಿದ್ಯುತ್ ನಿಗಮ ನಿಯಮಿತವು ರಾಯಚೂರು ಶಾಖೋತ್ಪನ್ನ ವಿದ್ಯುತ್ ಸ್ಥಾವರ ಯೋಜನೆಯ ಯೂನಿಟ್ 5 ಮತ್ತು 6ನ್ನು ಕೂಡಲೇ ಕಾರ್ಯಗತಗೊಳಿಸಲು ಸರ್ಕಾರ ಒಪ್ಪಿದೆ. ಇದನ್ನು ಕೇಂದ್ರ ಸರ್ಕಾರದೊಂದಿಗೆ ಸಮಾಲೋಚಿಸಲಾಗುತ್ತಿದೆ.

ಯಲಹಂಕ ಡೀಸೆಲ್ ಉತ್ಪಾದನಾ ಘಟಕದ ವಿಸ್ತರಣೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ಒಪ್ಪಿಗೆ ದೊರೆಯಬೇಕಾಗಿದೆ.

ಕೊಜೆಂಟ್ರಿಕ್ಸ್ ಕಂಪನಿಗೆ ಸಂಬಂಧಿಸಿದಂತೆ, ವಿದ್ಯುತ್ ಖರೀದಿ ಒಪ್ಪಂದಕ್ಕೆ ದಿನಾಂಕ : 30-9-1994ರಂದು ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯು ಸಹಿ ಹಾಕಿದೆ. ಮತ್ತು ವಿದ್ಯುತ್ ಖರೀದಿ ಒಪ್ಪಂದದ ಬಗ್ಗೆ ಅಂತಿಮವಾಗಿ ನಿರ್ಧಾರ ತೆಗೆದುಕೊಳ್ಳಬೇಕಾಗಿದೆ.

ಹೊಸಪೇಟೆ ಯೋಜನೆಯು ಹೆಚ್.ಓ.ಕೆ. (ಡೆಕ್ಕನ್ ಪವರ್ ಕಾರ್ಪೊರೇಷನ್) ಯಿಂದ ಕಾರ್ಯಗತಗೊಳಿಸಬೇಕಾಗಿದೆ. ಸದರಿ ಯೋಜನೆಗೆ ಕೇಂದ್ರ ಸರ್ಕಾರದ ಒಪ್ಪಿಗೆಗೆ ಪ್ರಯತ್ನಿಸಲಾಗುತ್ತಿದೆ.

ಚಾಮಾಲಾಪುರ ವಿದ್ಯುತ್ ಯೋಜನೆಗೆ ಸಂಬಂಧಿಸಿದಂತೆ ಈ ಯೋಜನೆಯನ್ನು ಕಾರ್ಯಗತಗೊಳಿಸುವ ಬಗ್ಗೆ ರಾಜ್ಯ ಸರ್ಕಾರವು ಇನ್ನೂ ನಿರ್ಧರಿಸಿರುವುದಿಲ್ಲ.

ಬೀದರ್ ಜಿಲ್ಲೆಯಲ್ಲಿ ಲೋಕೋಪಯೋಗಿ ರಸ್ತೆಗಳ ದುರಸ್ತಿ

2507-ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಕಿ.ಮೀ. ರಸ್ತೆಗಳು ಲೋಕೋಪಯೋಗಿ ಇಲಾಖೆಗೆ ಸೇರಿವೆ?

ಆ) ಇವುಗಳಲ್ಲಿ ರಾಜ್ಯ ಹೆದ್ದಾರಿಗೆ ಎಷ್ಟು ಕಿ.ಮೀ. ಬರುತ್ತದೆ.?

ಇ) ರಾಷ್ಟ್ರೀಯ ಹೆದ್ದಾರಿಗೆ ಎಷ್ಟು ಕಿಮೀ. ರಸ್ತೆ ಬರುತ್ತದೆ?

ಈ) ಜಿಲ್ಲೆಯಲ್ಲಿ ಇಲಾಖೆಯ ವಶದಲ್ಲಿರುವ ಅನೇಕ ರಸ್ತೆಗಳು ಹಾಳಾಗಿ ಜನ ಸಂಚಾರ ಮತ್ತು ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು ನಿಜವಲ್ಲವೇ?

ಉ) ಹಾಗಿದ್ದಲ್ಲಿ ಈ ರಸ್ತೆಗಳ ಸುಧಾರಣೆ ಮತ್ತು ದುರಸ್ತಿಗಾಗಿ ಈ ಆಯವ್ಯಯದಲ್ಲಿ ಎಷ್ಟು ಹಣವನ್ನು ಮೀಸಲಿಡಲಾಗಿದೆ?

ಊ) ಇದುವರೆವಿಗೆ ಬಿಡುಗಡೆ ಮತ್ತು ಖರ್ಚು ಮಾಡಲಾದ ಹಣದ ಪ್ರಮಾಣವೆಷ್ಟು?

ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು) :

ಅ) ಬೀದರ್ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆ ವ್ಯಾಪ್ತಿಯಲ್ಲಿ ಒಟ್ಟು 1044.10 ಕಿಮೀ. ಉದ್ದದ ರಸ್ತೆಗಳಿವೆ.

ಆ) ಬೀದರ್ ಜಿಲ್ಲೆಯಲ್ಲಿ ಬರುವ ರಾಜ್ಯ ಹೆದ್ದಾರಿಗಳ ಒಟ್ಟು ಉದ್ದ 276.60 ಕಿ.ಮೀ.ಗಳು.

ಇ) ಬೀದರ್ ಜಿಲ್ಲೆಯಲ್ಲಿ ಬರುವ ರಾಷ್ಟ್ರೀಯ ಹೆದ್ದಾರಿಯ ಉದ್ದ 75.00 ಕಿಮೀ.

ಈ) ಕೆಲವು ರಸ್ತೆಗಳು ಕಿಟ್ಟಿದ್ದು, ವಾಹನಗಳ ಸುಗಮ ಸಂಚಾರಕ್ಕೆ ತೊಂದರೆ ಆಗಿರುವುದು ವಾಸ್ತವವಾಗಿರುತ್ತದೆ.

ಉ) ರಸ್ತೆಗಳ ದುರಸ್ತಿ ಹಾಗೂ ನಿರ್ವಹಣೆಗೆ ಪ್ರತಿ ಕಿಮೀ. ಉದ್ದಕ್ಕೆ ಸರಾಸರಿ 15000.00 ರೂ.ಗಳನ್ನು ನಿಗಧಿಪಡಿಸಿದೆ. ಹಾಗೂ ಆಯ್ದ ಭಾಗಗಳ ಅಭಿವೃದ್ಧಿಗಾಗಿ 19.89 ಲಕ್ಷ ರೂ.ಗಳನ್ನು 1995-96ನೇ ಸಾಲಿನಲ್ಲಿ ನಿಗಧಿಪಡಿಸಿದೆ. ರಾಷ್ಟ್ರೀಯ ಹೆದ್ದಾರಿ ಭಾಗವನ್ನು ಬಲಪಡಿಸುವ ಕಾಮಗಾರಿಯನ್ನು ಸುಮಾರು 250.00 ಲಕ್ಷ ರೂ.ಗಳಿಗೆ ಗುತ್ತಿಗೆ ತೀರ್ಮಾನಿಸಿದೆ.

ಊ) ಬೀದರ್ ಜಿಲ್ಲೆಯಲ್ಲಿ ರಸ್ತೆಗಳ ಸುಧಾರಣೆ ಹಾಗೂ ಅಭಿವೃದ್ಧಿಗಾಗಿ 1992-93ರಿಂದ 1994-95ರ ಸಾಲಿನ ವರೆಗೆ ಒಟ್ಟು 508.14 ಲಕ್ಷ ರೂ.ಗಳನ್ನು ಒದಗಿಸಲಾಗಿದೆ.

ಕನ್ನಡ ವಾಕ್ಚಿತ್ರದ ವಜ್ರಮಹೋತ್ಸವ

2264 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) : ಮಾನ್ಯ ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ವಾಕ್ಚಿತ್ರಕ್ಕೆ ಈಗ 61 ವರ್ಷ ಕಳೆದು 62ನೇ ವರ್ಷ ನಡೆಯುತ್ತಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ಇದರ ನೆನಪಿನ ಅಂಗವಾಗಿ ವಜ್ರಮಹೋತ್ಸವವನ್ನು ಆಚರಿಸುವ ಉದ್ದೇಶ ಇದೆಯೇ?

ಇ) ಇದ್ದಲ್ಲಿ ಯಾವಾಗ ಆಚರಿಸಲಾಗುವುದು?

ಈ) ಈ ವಿಷಯವಾಗಿ ಪೂರ್ವಭಾವಿ ಸಿದ್ಧತೆಗಳು ನಡೆದಿವೆಯೇ? ನಡೆದಿದ್ದಲ್ಲಿ ವಿವರಗಳೇನು?

ಶ್ರೀ ಎಂ.ಸಿ. ನಾಣಯ್ಯ (ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) ನಿಜ.

ಆ) ಇದೆ

ಇ) ಈ ಬಗ್ಗೆ ರಚಿಸಿರುವ ಸಮಿತಿ ಸಭೆ ಸೇರಿ ನಿರ್ಧರಿಸಬೇಕಿದೆ.

ಈ) ವಜ್ರಮಹೋತ್ಸವ ಆಚರಿಸಲು ಸಮಿತಿಯೊಂದನ್ನು ರಚಿಸಲಾಗಿದೆ.

ರಾಜ್ಯದಲ್ಲಿರುವ ನಕಲಿ ರೇಷನ್ ಕಾರ್ಡುಗಳ ಪತ್ತೆ

2263 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?